**ದಿನಾಂಕ: 17-09-2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ಗಣ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಯತೀಶ್. ಎ. ಜೆ – ನೋಡೆಲ್ ಅಧಿಕಾರಿ ಮತ್ತು ಸ.ಕಾ.ನಿ.ಅ (ಬನಶಂಕರಿ) ಉಪವಿಭಾಗ
2. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ಕಿಯೋನಿಕ್ಸ್)
3. ಶ್ರೀ. ಪವನ್ – ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ. ಕವಿತ. ಜೆ – ಹಿರಿಯ ಆರೋಗ್ಯ ಪರಿವೀಕ್ಷಕರು

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯಲ್ಲಿ ಸಹಾಯ ಅಂತರ್ಜಾಲ ದೂರುಗಳು ಬರುತ್ತಿದ್ದು ಸದರಿ ದೂರುಗಳನ್ನು ಆಗಿಂದಾಗ್ಗೆ ಬಗೆಹರಿಸಲಾಗುತ್ತಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಬಿಡಬ್ಲ್ಯೂಎಸ್ಎಸ್‌ಬಿ ರವರ ವತಿಯಿಂದ ರಸ್ತೆ ಅಗೆಯಲಾಗುತ್ತಿದ್ದು ಸದರಿ ರಸ್ತೆ ಅಗೆತಗಳನ್ನು ಮುಂಚಿತವಾಗಿ ಬಿಬಿಎಂಪಿ ರವರ ಗಮನಕ್ಕೆ ತರಬೇಕೆಂದು ಹಾಗೂ ಕೆಲಸ ಮುಗಿದನಂತರ ಸದರಿ ರಸ್ತೆ ಅಗೆತಗಳನ್ನು ಮುಚ್ಚಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ತಿಳಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕಛೇರಿಯ ಸಮಸ್ಯೆ ಇರುವುದರಿಂದ ಸದರಿಯವರಿಗೆ ಒಂದು ಕಛೇರಿಯ ವ್ಯವಸ್ಥೆ ಮಾಡಿಕೊಡುವ ಬಗ್ಗೆ ನೋಡೆಲ್ ಅಧಿಕಾರಿಗಳು ಚರ್ಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದಾಗಿ ಉಂಟಾಗುತ್ತಿರುವ ರಸ್ತೆಗುಂಡಿಗಳನ್ನು ಆಗಿಂದಾಗ್ಗೆ ಮುಚ್ಚಲಾಗುತ್ತಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ಸಂಖ್ಯೆ 202 (ಹಳೆ ವಾರ್ಡ್ ಸಂಖ್ಯೆ 165) ರಲ್ಲಿನ ಎಲ್ಲಾ ಭಾಗಗಳ ಘನತ್ಯಾಜ್ಯ ವಿಲೇವಾರಿ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿರುತ್ತದೆ ಎಂದು ಸಮಿತಿ ಸದಸ್ಯರು ಅಭಿಪ್ರಾಯಿಸಿದರು.

ಪು.ತಿ.ನೋ

ವಾರ್ಡ್ ವ್ಯಾಪ್ತಿಯ ಉದ್ಯಾನವನಗಳ ಕೆಲವು ಪ್ರದೇಶಗಳಲ್ಲಿ ಮಳೆ ನೀರು ತುಂಬಿ ಸೊಳ್ಳೆಗಳು ಹೆಚ್ಚಾಗಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದರು. ಆದ್ದರಿಂದ ಸದರಿ ಉದ್ಯಾನವನಗಳಲ್ಲಿ ಸೊಳ್ಳೆಗಳು ಇರುವ ಪ್ರದೇಶಗಳಿಗೆ ಔಷಧಿ ಸಿಂಪಡಿಸಲು ಕ್ರಮವಹಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ-6, ತೆಗೆದುಹಾಕಲು ನಮೂನೆ-7 ಮತ್ತು ತಿದ್ದುಪಡಿಗೊಳಿಸಲು ನಮೂನೆ-8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಯತೀಶ್. ಎ. ಜೆ, ನೋಡೆಲ್ ಅಧಿಕಾರಿ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ